# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ಕೃಷ್ಣಾ ಕೊಳ್ಳದ ಭೀಮಾ ನದಿ ಪಾತ್ರದಿಂದ ಜೋಳದಡಗಿ-ಗೂಡೂರ್ ಬ್ಯಾರೇಜ್ ನೀರಿನ ಸಂಗ್ರಹಣೆಯಿಂದ ನೀರನ್ನು ಲಿಫ್ಟ್ ಮಾಡಿ ಯಾದಗಿರಿ ಜಿಲ್ಲೆಯ ಗುರುಮಿಠಕಲ್ ಮತಕ್ಷೇತ್ರ ವ್ಯಾಪ್ತಿಯ 20 ಕೆರೆಗಳನ್ನು ತುಂಬಿಸುವ ಯೋಜನೆಯನ್ನು ವಿಶೇಷ ಅಭಿವೃದ್ಧಿ ಯೋಜನೆಯಡಿ ಕೈಗೆತ್ತಿಕೊಳ್ಳುವ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

***

**ಓದಲಾಗಿದೆ:-** 1. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ವ್ಯ.ನಿ./130ನೇ ಮಂಡಳಿ/ತಾಂತ್ರಿಕ-1/2021-22/989, ದಿನಾಂಕ:23.07.2021

2. ಯೋಜನಾ ಇಲಾಖೆಯ ಆದೇಶ ಸಂಖ್ಯೆ: ಪಿಡಿಎಸ್ 38 ಎಸ್ ಡಿ ಪಿ 2021, ದಿನಾಂಕ: 12.08.2021.
3. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ವ್ಯ.ನಿ./ಗುರುಮಿಠಕಲ್-22 ಕೆರೆ/ತಾಂತ್ರಿಕ -1/2021-22/25, ದಿನಾಂಕ:04.04.2022

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ (ಕೃ.ಭಾ.ಜ.ನಿ.ನಿ.) ರವರು ಉತ್ತರ ಕರ್ನಾಟಕದ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳು ಕಡಿಮೆ ಮಳೆ ಆಧಾರಿತ ಬರ ಪೀಡಿತ ಪ್ರದೇಶಗಳಾಗಿದ್ದು, ಡಾ:ಎಂ.ನಂಜುಂಡಪ್ಪ ವರದಿಯನ್ವಯ ಅತೀ ಹಿಂದುಳಿದ ಪ್ರದೇಶಗಳೆಂದು ವರ್ಗೀಕರಿಸಲಾಗಿರುತ್ತದೆ ಹಾಗೂ ಭಾರತ ಸರ್ಕಾರದ ಸಂವಿಧಾನದಲ್ಲಿ ಕಲಂ 371(ಜೆ) ರನ್ವಯ ವಿಶೇಷ ಸ್ಥಾನಮಾನ ಕಲ್ಪಿಸಲಾಗಿರುತ್ತದೆ ಎಂದು ವರದಿ ಮಾಡಿರುತ್ತಾರೆ.

ಭೀಮಾ ನದಿಗೆ ಅಡ್ಡಲಾಗಿ ನಿರ್ಮಿಸಲಾದ ಜೋಳದಡಗಿ-ಗೂಡೂರ್ ಬ್ಯಾರೇಜಿನಡಿ ನೀರಿನ ಸಂಗ್ರಹಣೆಯಿಂದ ನೀರನ್ನು ಲಿಫ್ಟ್ ಮಾಡಿ ಯಾದಗಿರಿ ತಾಲ್ಲೂಕಿನಡಿಯ ಗುರಮಿಠಕಲ್ ಮತಕ್ಷೇತ್ರ 20 ಕೆರೆಗಳನ್ನು ತುಂಬಿಸಲು ಪ್ರಸ್ತಾಪಿಸಲಾಗಿದ್ದು, ಸದರಿ ಯೋಜನೆ ಕೈಗೆತ್ತಿಕೊಳ್ಳುವುದರಿಂದ ಸುತ್ತಮುತ್ತಲಿನ ರೈತರ ಸಾಮಾಜಿಕ ಮತ್ತು ಆರ್ಥಿಕ ಮಟ್ಟ ಸುಧಾರಣೆಗೆ ಯೋಜಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕೃ.ಭಾ.ಜ.ನಿ ರವರು ವರದಿ ಮಾಡಿರುತ್ತಾರೆ.

ಸರ್ಕಾರವು 2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರೂ.150.00 ಕೋಟಿ ವೆಚ್ಚದಲ್ಲಿ ಕೃಷ್ಣಾ ಕೊಳ್ಳದಲ್ಲಿ ಗುರಮಿಠಕಲ್ ವ್ಯಾಪ್ತಿಯಲ್ಲಿ ಭೀಮಾ ನದಿಯಿಂದ 20 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಘೋಷಿಸಿದೆ.

ಇದಲ್ಲದೇ, ಮೇಲೆ ಓದಲಾದ (2)ರ ಆದೇಶರನ್ವಯ 2021-22ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯಡಿ ಅನುಮೋದನೆಗೊಂಡಿರುವ ಕ್ರಿಯಾ ಯೋಜನೆಯಡಿ ಗುರುಮಿಠಕಲ್ ಮತಕ್ಷೇತ್ರ ವ್ಯಾಪ್ತಿಯ 20 ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ರೂ.659.00 ಲಕ್ಷ ಅನುದಾನ ಹಂಚಿಕೆ ಮಾಡಲಾಗಿದೆ.

ದಿನಾಂಕ:25.06.2019 ರಂದು ಜರುಗಿದ ಕೃಷ್ಣಾ ಭಾಗ್ಯ ಜಲ ನಿಗಮದ ತಾಂತ್ರಿಕ ಉಪ ಸಮಿತಿಯ 14ನೇ ಸಭೆಯ ಶಿಫಾರಸ್ಸಿನ ಮೇರೆಗೆ ಪ್ರಸ್ತಾವನೆಯನ್ನು ದಿನಾಂಕ:22.07.2021 ರಂದು ಜರುಗಿದ ಕೃಷ್ಣಾ ಭಾಗ್ಯ ಜಲ ನಿಗಮದ ನಿರ್ದೇಶಕರ ಮಂಡಳಿಯ 130ನೇ ಸಭೆಯಲ್ಲಿ ಚರ್ಚಿಸಲಾಗಿದ್ದು, ಮಂಡಳಿಯು ಈ ಕೆಳಗಿನಂತೆ ಅನುಮೋದನೆ ನೀಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕೃ.ಭಾ.ಜ.ನಿ ರವರು ವರದಿ ಮಾಡಿರುತ್ತಾರೆ.

*"ಸದರಿ ಯೋಜನೆಗೆ ದಿನಾಂಕ:25/06/2019 ರಂದು ಜರುಗಿದ ನಿಗಮದ 14ನೇ ತಾಂತ್ರಿಕ ಉಪ ಸಮಿತಿಯ ಸಭೆಯಲ್ಲಿ ಗುರುಮಿಠಕಲ್ ಮತಕ್ಷೇತ್ರ ವ್ಯಾಪ್ತಿಯಲ್ಲಿ ಭೀಮಾ ನದಿ ಪಾತ್ರದ ಜೋಳದಡಗಿ-ಗೂಡೂರ್ ಬ್ಯಾರೇಜಿನಿಂದ 20 ಕೆರೆಗಳಿಗೆ ನೀರು ತುಂಬಿಸುವರೂ.165.00 ಕೋಟಿ ಅಂದಾಜು ಮೊತ್ತದ ಪ್ರಸ್ತಾವನೆಗೆ ಮಂಡಳಿ ಸಭೆಯ ಅನುಮೋದನೆಯೊಂದಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆಗೆ ಪ್ರಸ್ತಾವನೆಯನ್ನು ಸಲ್ಲಿಸಲು ಶಿಫಾರಸ್ಸು ಮಾಡಿರುವುದನ್ನು ಮಂಡಳಿ ಸಭೆಯು ಗಮನಿಸಿತು.*

*ಮಂಡಳಿಯು ಸದರಿ ವಿಷಯದ ಬಗ್ಗೆ ವಿವರಣಾತ್ಮಕ ಕಾರ್ಯಸೂಚಿಯನ್ನು ಅವಗಾಹಿಸಿತು. ಸಭೆಯು ಸದರಿ ವಿಷಯದ ಕುರಿತು ಅವಲೋಕಿಸಿ, ಚರ್ಚಿಸಿದಂತೆ 2019-20ನೇ ಸಾಲಿನ ಆಯವ್ಯಯದಲ್ಲಿಯ ಘೋಷಣೆಗೆ ಅನುಗುಣವಾಗಿ ಮತ್ತು ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಈಗಾಗಲೇ ಸೇರ್ಪಡೆಗೊಂಡಿರುವ ಸದರಿ ಪ್ರಸ್ತಾವನೆಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ಕೋರಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಹಾಗೂ ಯೋಜನೆಗೆ ಅವಶ್ಯಕವಿರುವ ನೀರನ್ನು ಸಣ್ಣ ನೀರಾವರಿ ಕೆರೆಗಳ ನೀರಿನ ಹಂಚಿಕೆಯಡಿ ಪರಿಗಣಿಸಲು ಅನುಮೋದಿಸಿತು".*

ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಹಾಗೂ 2019-20ನೇ ಸಾಲಿನ ಆಯವ್ಯಯದಲ್ಲಿನ ಘೋಷಣೆಗೆ ಅನುಗುಣವಾಗಿ ಮತ್ತು 2021-22ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಈಗಾಗಲೇ ಸೇರ್ಪಡೆಗೊಂಡು ಅನುಮೋದನೆಗೊಂಡಿರುವ ಗುರುಮಿಠಕಲ್ ಮತಕ್ಷೇತ್ರ ವ್ಯಾಪ್ತಿಯಲ್ಲಿ ಭೀಮಾ ನದಿ ಪಾತ್ರದ ಜೋಳದಡಗಿ-ಗೂಡೂರ ಬ್ಯಾರೇಜ್ ನಿಂದ 20 ಕೆರೆಗಳಿಗೆ ನೀರು ತುಂಬಿಸುವ ರೂ.165.00 ಕೋಟಿ ಅಂದಾಜು ಮೊತ್ತದ ವಿವರವಾದ ಯೋಜನಾ ವರದಿಗೆ ಯೋಜನೆಗೆ ಅವಶ್ಯಕವಿರುವ ನೀರನ್ನು ಈಗಾಗಲೇ ಹಂಚಿಕೆಯಾದ ಸಣ್ಣ ನೀರಾವರಿ ಕೆರೆಗಳ ನೀರಿನ ಹಂಚಿಕೆಯಡಿ ಪರಿಗಣಿಸಿ ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ರವರು ಕೋರಿರುತ್ತಾರೆ.

ಮೇಲೆ ಓದಲಾದ (3)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ರವರು ಯೋಜನೆಯ ಅಂದಾಜು ಮೊತ್ತವನ್ನು ನಿಗಮದ ERC ಸಭೆಯಲ್ಲಿ ಮರು-ಪರಿಶೀಲಿಸಿ ಯೋಜನೆಯ ರೂ.165.00 ಕೋಟಿ (2021-22ನೇ ಸಾಲಿನ ದರ ಪಟ್ಟಿ) ಅಂದಾಜು ಮೊತ್ತದ ಪ್ರಸ್ತಾವನೆಯನ್ನು ಕೃಷ್ಣಾ ಭಾಗ್ಯ ಜಲ ನಿಗಮಯಮಿತದಿಂದ ಅನುಷ್ಠಾನಗೊಳಿಸಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಇ-ಸಂಖ್ಯೆ:ಜಸಂಇ 164 ಕೆಬಿಎನ್ 2021, ಬೆಂಗಳೂರು, ದಿನಾಂಕ:20.04.2022**

ಕೃಷ್ಣಾ ಕೊಳ್ಳದ ಭೀಮಾ ನದಿ ಪಾತ್ರದಿಂದ ಜೋಳದಡಗಿ-ಗೂಡೂರ್ ಬ್ಯಾರೇಜ್ ನೀರಿನ ಸಂಗ್ರಹಣೆಯಿಂದ ನೀರನ್ನು ಲಿಫ್ಟ್ ಮಾಡಿ ಯಾದಗಿರಿ ಜಿಲ್ಲೆಯ ಗುರುಮಿಠಕಲ್ ಮತಕ್ಷೇತ್ರ ವ್ಯಾಪ್ತಿಯ 20 ಕೆರೆಗಳನ್ನು ತುಂಬಿಸುವ ರೂ.165.00 ಕೋಟಿ ಅಂದಾಜು ಮೊತ್ತದ ಯೋಜನೆಯನ್ನು ಯೋಜನೆಗೆ ಅವಶ್ಯಕವಿರುವ ನೀರನ್ನು ಈಗಾಗಲೇ ಸಣ್ಣ ನೀರಾವರಿ ಇಲಾಖೆಯ ಕೆರೆಗಳಿಗೆ ಹಂಚಿಕೆಯಾದ ನೀರಿನ ಹಂಚಿಕೆಯಡಿ ಪರಿಗಣಿಸಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಕೈಗೆತ್ತಿಕೊಳ್ಳುವ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 381 ಆಕೋ-1/2021(ಇ-ಆಫೀಸ್), ದಿನಾಂಕ:09.12.2021 ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 48 ಎಸ್‌ಡಿಪಿ2021, ದಿನಾಂಕ:21.09.2021 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

20/4/2022

(ರವೀಂದ್ರ ಕೊಂಡ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

1. ಮಹಾಲೇಖಪಾಲರು (ಎ&ಇ) / (ಇ&ಆರ್.ಎಸ್.ಎ) / (ಜಿ&ಎಸ್.ಎಸ್.ಎ), ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು
9. ಮುಖ್ಯ ಇಂಜಿನಿಯರ್, ಕೃ.ಭಾ.ಜ.ನಿ. ಕಾಲುವೆ ವಲಯ ಸಂ-1, ಭೀ.ಗುಡಿ.
10. ವಿಶೇಷಾಧಿಕಾರಿಗಳು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ, (ಲೋ.ಆಕೋ) ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ) (ಪ್ರಕರಣ ಸಂಖ್ಯೆ. ಸಿ-27/2022), ವಿಧಾನ ಸೌಧ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿ (ಕೃ.ಭಾ.ಜ.ನಿ) ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
13. ಶಾಖಾ ಸಹಾಯಕರು-6, ಜಲ ಸಂಪನ್ಮೂಲ ಇಲಾಖೆ.
14. ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿಗಳು.